ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

21ನೇ ಮಹಡಿ, ವಿ.ವಿ. ದೊಡ್ಡಗೋಪುರ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-01
ಕಛೇರಿ : 080-2286 4212 ಫ್ಯಾಕ್ಸ್ : 080-2286 5958
ವೆಬ್‌ಸೈಟ್ : https//:gokdom.kar.nic.in
ಇ-ಮೇಲ್ : directorgokdom@gmail.com

**ಸಂಖ್ಯೆ:ಅಸಂನಿ/ಫೆಲೋಶಿಪ್/ಸಿಆರ್-01/2019-20** **ದಿನಾಂಕ:13.05.2019**

## 'ಸುತ್ತೋಲೆ'

**ವಿಷಯ:-** ಪಿಹೆಚ್.ಡಿ/ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮಾಹೆಯಾನ ರೂ.25,000/-ಗಳ ಫೆಲೋಶಿಪ್ ನೀಡುವ ಕುರಿತು.

**ಉಲ್ಲೇಖ:-**
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 462 ಎಂಡಿಎಸ್ 2016, ದಿನಾಂಕ:24-01-2017
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 157 ಎಂಡಿಎಸ್ 2017, ದಿನಾಂಕ:09-05-2017

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ಭಾರತ/ಕನಾಟಕ ರಾಜ್ಯದ ಶಾಸನಬದ್ದ ಅಂಗೀಕೃತವಾದ ವಿಶ್ವವಿದ್ಯಾನಿಲಯಗಳಲ್ಲಿ ಪೂರ್ಣಕಾಲಿಕವಾಗಿ (Full Time) ಪಿಹೆಚ್.ಡಿ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 3 ವರ್ಷ ಮತ್ತು ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ 2 ವರ್ಷಗಳ ಅವಧಿಗೆ ಮಾತ್ರ ಪ್ರತಿ ಮಾಹೆಯಾನ ರೂ.25,000/- (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಮತ್ತು ಪ್ರತಿ ವರ್ಷಕ್ಕೆ ಒಂದು ಬಾರಿಗೆ ರೂ.10,000/-(ಹತ್ತು ಸಾವಿರ ರೂಪಾಯಿಗಳು ಮಾತ್ರ) ನಿರ್ವಹಣಾ ವೆಚ್ಚವನ್ನು ಫೆಲೋಶಿಪ್ ಮೂಲಕ ನೀಡಲಾಗುತ್ತಿದೆ. ಉಲ್ಲೇಖ (2) ರ ಸರ್ಕಾರದ ಆದೇಶದನ್ವಯ ಅಲ್ಪಸಂಖ್ಯಾತರ ಸಂಬಂಧಿತ ವಿಷಯಗಳಲ್ಲಿ ಅಧ್ಯಯನ ಮಾಡುವವರಿಗೆ ಮೊದಲ ಆದ್ಯತೆ ನೀಡಲಾಗುವುದು ಹಾಗೂ ಇತರೆ ವಿಷಯಗಳಲ್ಲಿ ಅಧ್ಯಯನ ನಡೆಸುತ್ತಿರುವ ಅಲ್ಪಸಂಖ್ಯಾತರ ಅಭ್ಯರ್ಥಿಗಳನ್ನೂ ಸಹ ಪರಿಗಣಿಸಲಾಗುವುದು.

2016-17 ನೇ ಸಾಲಿನಿಂದ ಪಿಹೆಚ್.ಡಿ/ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ ಫೆಲೋಶಿಪ್ ಅನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ನೀಡಲಾಗುತ್ತಿದೆ. ಪ್ರಸ್ತುತ 2019-20ನೇ ಸಾಲಿನಿಂದ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಹಾಗೂ ಅಭ್ಯರ್ಥಿಗಳ ವ್ಯಾಸಂಗದ ಮೇಲ್ವಿಚಾರಣೆ ಸುಗಮಗೊಳಿಸುವ ಸಲುವಾಗಿ ಸದರಿ ಯೋಜನೆಯನ್ನು ಜಿಲ್ಲಾ ಹಂತದಲ್ಲಿಯೇ ನಿರ್ವಹಿಸಲು ನಿರ್ಧರಿಸಲಾಗಿದ್ದು, ಆಯಾ ಜಿಲ್ಲೆಗಳಲ್ಲಿ ಪೂರ್ಣಕಾಲಿಕವಾಗಿ (Full Time) ಪಿಹೆಚ್.ಡಿ/ಎಂ.ಫಿಲ್ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಅಭ್ಯರ್ಥಿಗಳ ಮುಖಾಂತರ ಅರ್ಜಿಯೊಂದಿಗೆ ಸೂಚಿಸಲಾಗಿರುವ

ದಾಖಲೆಗಳನ್ನು ಪಡೆದು ಪರಶೀಲಿಸಿ ಪ್ರತ್ಯೇಕ ಕಡತಗಳಲ್ಲಿ ಮಾರ್ಗಸೂಚಿಗಳನ್ವಯ (ಲಗತ್ತಿಸಿದೆ) ನಿರ್ವಹಿಸುದು ಹಾಗೂ ಮುಂದಿನ ಕ್ರಮ ವಹಿಸಲು ಸೂಚಿಸಿದೆ.

2016-17, 2017-18 ಮತ್ತು 2018-19ನೇ ಸಾಲಿನವರೆಗೆ ಫೆಲೋಶಿಪ್‌ಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮಾತ್ರ ಅನುದಾನವನ್ನು ನೇರವಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಬಿಡುಗಡೆ ಮಾಡಲಾಗುವುದು. (ಜಿಲ್ಲಾವಾರು ಅಭ್ಯರ್ಥಿಗಳ ಪಟ್ಟಿಯನ್ನು ಲಗತ್ತಿಸಲಾಗಿದೆ) 2019-20 ನೇ ಸಾಲಿನಿಂದ ಫೆಲೋಶಿಪ್‌ಗೆ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಬಿಡುಗಡೆ ಮಾಡುವುದು ಹಾಗೂ ವಿದ್ಯಾರ್ಥಿಗಳ ಆಯ್ಕೆ ಮತ್ತು ಅನುದಾನ ಬಿಡುಗಡೆ ಮಾಡುವುದರ ಬಗ್ಗೆ ಸಂಪೂರ್ಣವಾಗಿ ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಜವಾಬ್ದಾರರಾಗಿರುತ್ತಾರೆ.

**(ಇಸ್ಲಾವುದ್ದೀನ್ ಜೆ. ಗದ್ಯಾಳ, ಕೆ.ಎ.ಎಸ್)**
**ನಿರ್ದೇಶಕರು**
**ಅಲ್ಪಸಂಖ್ಯಾತರ ನಿರ್ದೇಶನಾಲಯ**
**ಬೆಂಗಳೂರು**

ಪ್ರತಿಯನ್ನು:-

1) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
2) ಎಲ್ಲಾ ಜಿಲ್ಲಾಧಿಕಾರಿಗಳು.
3) ಎಲ್ಲಾ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಜಿಲ್ಲೆ.
4) ಕಛೇರಿ ಪ್ರತಿ
5) ಹೆಚ್ಚುವರಿ ಪ್ರತಿ